ಆ)

ವಿದ್ಯಾರ್ಥಿ ನಿಲಯಗಳ ಸಂಖ್ಯೆ						ವಸತಿ ಶಾಲೆಗಳ ಸಂಖ್ಯೆ					
ಪ.ಜಾ		ಪ.ಪಂ		ಹಿಂ.ವ		ಪ.ಜಾ		ಪ.ಪಂ		ಹಿಂ.ವ	
ಸ್ವಂತ	ಬಾಡಿಗೆ	ಸ್ವಂತ	ಬಾಡಿಗೆ	ಸ್ವಂತ	ಬಾಡಿಗೆ	ಸ್ವಂತ	ಬಾಡಿಗೆ	ಸ್ವಂತ	ಬಾಡಿಗೆ	ಸ್ವಂತ	ಬಾಡಿಗೆ
49	10	2	7	39	37	8	8	–	–	02	03

ಇ) ವಿದ್ಯಾರ್ಥಿ ನಿಲಯ ಹಾಗೂ ವಸತಿ ಶಾಲೆಗಳಿಗೆ ಸೂಕ್ತ ನಿವೇಶನ ಇಲಾಖೆಯ ವಶಕ್ಕೆ ದೊರಕಿದ ಕೂಡಲೇ ಅನುದಾನ ಲಭ್ಯತೆ ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು.

ರಾಜ್ಯದಲ್ಲಿರುವ ಭಿಕ್ಷಾಟನೆ ನಿರ್ಮೂಲನ ಕಾಯ್ದೆ

5113 (5846); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ರಾಜ್ಯದಲ್ಲಿ ಭಿಕ್ಷಾಟನೆ ನಿರ್ಮೂಲನೆ ಕಾಯ್ದೆಯು ಜಾರಿಯಲ್ಲಿದ್ದರೂ ಸಮರ್ಪಕವಾಗಿ ಜಾರಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೀದರ್ ಜಿಲ್ಲೆಯಲ್ಲಿ ಹೆಚ್ಚು ಭಿಕ್ಷುಕರಿದ್ದು ಅವರುಗಳನ್ನು ನಿರಾಶ್ರಿತರ ಪರಿಹಾರ ಕೇಂದ್ರಗಳಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು;

ಇ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಭಿಕ್ಷುಕರನ್ನು ನಿರಾಶ್ರಿತರ ಪರಿಹಾರ ಕೇಂದ್ರಕ್ಕೆ ಸೇರಿಸಲಾಗಿದೆ;

ಈ) ಸರ್ಕಾರ ಈ ಸಾಲಿನಲ್ಲಾದರೂ ಬೀದರ್ ಜಿಲ್ಲೆಯಲ್ಲಿ ನಿರಾಶ್ರಿತರ ಕೇಂದ್ರ ಸ್ಥಾಪಿಸಲು ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಇಲ್ಲ

ಆ) ಬೀದರ್ ಜಿಲ್ಲೆಯಲ್ಲಿ ನಿರಾಶ್ರಿತರ ಪರಿಹಾರ ಕೇಂದ್ರ ಪ್ರಾರಂಭಿಸಲು ಅಗತ್ಯವಿರುವ ಜಮೀನನ್ನು ಜಿಲ್ಲಾಡಳಿತದಿಂದ ಪಡೆಯುವ ಬಗ್ಗೆ ಕ್ರಮ ವಹಿಸಲಾಗಿದೆ.

ಇ) ಬೀದರ್ ಜಿಲ್ಲೆಯಲ್ಲಿನ 36 ಭಿಕ್ಷುಕರನ್ನು ಬಂದಿಸಿ, ಕಲ್ಬುರ್ಗಿ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ದಾಖಲಿಸಲಾಗಿದೆ.

ಈ) ಅಗತ್ಯವಿರುವ ಜಮೀನು ಜಿಲ್ಲಾಡಳಿತದಿಂದ ಮಂಜೂರಾದ ತಕ್ಷಣ ನಿರಾಶ್ರಿತರ ಪರಿಹಾರ ಕೇಂದ್ರ ಪ್ರಾರಂಭಿಸಲಾಗುತ್ತದೆ.

ಗಂಗಾ ಕಲ್ಯಾಣ ಯೋಜನೆಗಳ ಕಾಮಗಾರಿಗಳು

5114 (5847); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯ ಕಾಮಗಾರಿಗಳು ತುಂಬಾ ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹೌದು